**ಪ್ರಿಯಾಂಕ್ ಖರ್ಗೆ**
ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್
ಹಾಗೂ ಮಾಹಿತಿ ತಂತ್ರಜ್ಞಾನ &
ಜೈವಿಕ ತಂತ್ರಜ್ಞಾನ ಸಚಿವರು ಹಾಗೂ
ಕಲಬುರಗಿ ಜಿಲ್ಲಾ ಉಸ್ತುವಾರಿ ಸಚಿವರು

ಕರ್ನಾಟಕ ಸರ್ಕಾರ

ಕೊಠಡಿ ಸಂಖ್ಯೆ: 242–243
2ನೇ ಮಹಡಿ, ವಿಕಾಸಸೌಧ,
ಬೆಂಗಳೂರು – 560 001
ದೂರವಾಣಿ: 080–22258965
080–22034647
ಇ–ಮೇಲ್: minister.rdpritbtkar@gmail.com

**ಸಂಖ್ಯೆ: ಗ್ರಾ.ಅ & ಪಂ.ರಾ & ಐಟಿ & ಬಿಟಿ/ಸ/ 787 /2025**

**ದಿನಾಂಕ: 13.10.2025**

**ನಡವಳಿ**

ಕರ್ನಾಟಕ ರಾಜ್ಯದಲ್ಲಿ ಸರ್ಕಾರಿ ನೌಕರರುಗಳಿಗೆ ಕರ್ನಾಟಕ ನಾಗರಿಕ ಸೇವಾ(ನಡತೆ) ನಿಯಮಗಳು, 2021 ಅಡಿ ನಿಯಮ 5(1) ಪ್ರಕಾರ ಈ ಕೆಳಕಂಡ ನಿಯಮವು ಈಗಾಗಲೇ ಜಾರಿಯಲ್ಲಿರುತ್ತದೆ.

**"ಯಾರೇ ಸರ್ಕಾರಿ ನೌಕರನು, ಯಾವುದೇ ರಾಜಕೀಯ ಪಕ್ಷದ ಅಥವಾ ರಾಜಕಾರಣದಲ್ಲಿ ಭಾಗವಹಿಸುವಂಥ ಯಾವುದೇ ಸಂಘ ಸಂಸ್ಥೆಯ ಸದಸ್ಯನಾಗಿರತಕ್ಕದ್ದಲ್ಲ ಅಥವಾ ಅವುಗಳೊಂದಿಗೆ ಅನ್ಯಥಾ ಸಂಬಂಧ ಹೊಂದಿರತಕ್ಕದ್ದಲ್ಲ ಅಥವಾ ಯಾವುದೇ ರಾಜಕೀಯ ಚಳುವಳಿ ಅಥವಾ ಚಟುವಟಿಕೆಯಲ್ಲಿ ಭಾಗವಹಿಸತಕ್ಕದ್ದಲ್ಲ, ಅದರ ಸಹಾಯಾರ್ಥ ವಂತಿಗೆ ನೀಡತಕ್ಕದ್ದಲ್ಲ ಅಥವಾ ಅದಕ್ಕೆ ಯಾವುದೇ ರೀತಿಯ ನೆರವು ನೀಡತಕ್ಕದ್ದಲ್ಲ."** ಎಂದು ಸ್ಪಷ್ಟವಾಗಿ ನಿರ್ದೇಶನ ನೀಡಲಾಗಿದ್ದರೂ ಸಹ ಇತ್ತೀಚಿನ ದಿನಗಳಲ್ಲಿ ರಾಷ್ಟ್ರೀಯ ಸ್ವಯಂ ಸೇವಕ ಸಂಘ ಹಾಗೂ ಇತರೆ ಸಂಘ ಸಂಸ್ಥೆಗಳು ಹಮ್ಮಿಕೊಳ್ಳುವ ಕಾರ್ಯಕ್ರಮಗಳು ಹಾಗೂ ಚಟುವಟಿಕೆಗಳಲ್ಲಿ ಸರ್ಕಾರಿ ಅಧಿಕಾರಿಗಳು ಹಾಗೂ ನೌಕರರು ಭಾಗವಹಿಸುತ್ತಿರುವುದನ್ನು ಗಮನಿಸಲಾಗಿದೆ.

ಆದ್ದರಿಂದ ರಾಜ್ಯದ ಸರ್ಕಾರಿ ಅಧಿಕಾರಿ ಮತ್ತು ನೌಕರರು ರಾಷ್ಟ್ರೀಯ ಸ್ವಯಂ ಸೇವಕ ಸಂಘ ಹಾಗೂ ಇತರೆ ಸಂಘ ಸಂಸ್ಥೆಗಳು ಹಮ್ಮಿಕೊಳ್ಳುವ ಕಾರ್ಯಕ್ರಮಗಳು ಹಾಗೂ ಚಟುವಟಿಕೆಗಳಲ್ಲಿ ಭಾಗವಹಿಸುವುದನ್ನು ಕಟ್ಟುನಿಟ್ಟಾಗಿ ನಿಷೇಧಿಸಿ ಹಾಗೂ ಇದನ್ನು ಉಲ್ಲಂಘಿಸುವ ಅಧಿಕಾರಿ ನೌಕರರ ವಿರುದ್ಧ ಶಿಸ್ತುಕ್ರಮ ಕೈಗೊಳ್ಳಲಾಗುವುದೆಂದು ತಿಳಿಸುವ ಸುತ್ತೋಲೆಯನ್ನು ಹೊರಡಿಸಲು ಸಂಬಂಧಪಟ್ಟವರಿಗೆ ಸೂಕ್ತ ನಿರ್ದೇಶನ ನೀಡುವಂತೆ ಕೋರಿದೆ.

**ಗೌರವಗಳೊಂದಿಗೆ,**

(ಪ್ರಿಯಾಂಕ್ ಖರ್ಗೆ)

**ಶ್ರೀ ಸಿದ್ದರಾಮಯ್ಯ ರವರು,**
ಸನ್ಮಾನ್ಯ ಮುಖ್ಯಮಂತ್ರಿಗಳು,
ಕರ್ನಾಟಕ ಸರ್ಕಾರ
ವಿಧಾನಸೌಧ
ಬೆಂಗಳೂರು.